**ಸಾಕ್ಷಿಗೆ ದಿನಾಂಕ 06-07-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಶ್ರೀ ಆರ್.ಟಿ.ಕೆ. 1 ನೇ ಎದುರುದಾರರ ಪರ ವಕೀಲರಿಂದ**

ನಮ್ಮ ತಂದೆಯ ಜೀವಿತಾವಧಿಯಲ್ಲಿ ಜಮೀನು ಸ್ವಾಧೀನ ಆಗಿರುತ್ತದೆ ಎಂದರೆ ನಿಜ. ಸರಕಾರ ಸ್ವಾಧೀನಪಡಿಸಿಕೊಂಡ ಜಮೀನಿನ ಸ.ನಂ.27 ಆಗಿದೆ. ಸದರಿ ಸ.ನಂ.27 ರಲ್ಲಿ 2 ಎಕರೆ 26 ಗುಂಟೆ ಚಿಲ್ಲರೆ ಜಮೀನು ಸ್ವಾಧೀನಪಡಿಸಿಕೊಂಡಿರುತ್ತಾರೆ. ಸದರಿ ಸ್ವಾಧೀನಪಡಿಸಿಕೊಂಡ ಜಮೀನು ಖುಷ್ಕಿ ಜಮೀನು ಆಗಿತ್ತು ಎಂದರೆ ಸರಿಯಲ್ಲ. ಸಾಕ್ಷಿ ನೀರಾವರಿ ಜಮೀನು ಆಗಿತ್ತು ಎಂದು ನುಡಿಯುತ್ತಾರೆ. ಸದರಿ ಜಮೀನು ನೀರಾವರಿ ಜಮೀನಾಗಿದ್ದ ಬಗ್ಗೆ ದಾಖಲಾತಿಯನ್ನು ನ್ಯಾಯಾಲಯದಲ್ಲಿ ಹಾಜರುಪಡಿಸಿರುತ್ತೇನೆ. ನಮ್ಮ ತಂದೆ ತಮ್ಮ ಜೀವಿತಾವಧಿಯಲ್ಲಿ ಕಲಂ 18 (1) ಅಡಿಯಲ್ಲಿ ಸಲ್ಲಿಸಿದ ಅರ್ಜಿ ನಿಗದಿತ ಅವಧಿಯಲ್ಲಿ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ಭೂಸ್ವಾಧೀನಾಧಿಕಾರಿಗಳು ಜಮೀನಿಗೆ ಬಂದು ಪರಿಶೀಲಿಸಿ ಯೋಗ್ಯ ಪರಿಹಾರ ಧನ ನೀಡಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಜಮೀನಿನಲ್ಲಿ ಬಾಳೆ ಹಣ್ಣು, ಕಬ್ಬು, ಮೆಣಸಿನಕಾಯಿ ಬೆಳೆಯುತ್ತಿದ್ದೆವು ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಮ್ಮ ಜಮೀನಿನಲ್ಲಿ ಪ್ರತಿ ಎಕರೆಗೆ 50 ಟನ್ ಕಬ್ಬು ಹಾಗೂ 90 ಟನ್ ಬಾಳೆ, ಹಾಗೂ 30 ಕ್ವಿಂಟಲ್ ಮೆಣಸಿನಕಾಯಿ ಉತ್ಪನ್ನ ಬರುತ್ತಿತ್ತು ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಅವಾರ್ಡ್ ದಿನಾಂಕದಂದು ಸ್ವಾಧೀನಪಡಿಸಿಕೊಂಡ ಜಮೀನಿನ ಮಾರುಕಟ್ಟೆ ಬೆಲೆ 12 ಲಕ್ಷ ಆಗುತ್ತಿತ್ತು ಅಂತಾ ತೋರಿಸಲು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಿಪಿ-4 ರ ಪ್ರಕರಣದಲ್ಲಿ ಸ್ವಾಧೀನಪಡಿಸಿಕಜೊಂಡ ಜಮೀನು ಚಿತ್ತಾಪೂರ ತಾಲೂಕಿನ ಹದನೂರು ಗ್ರಾಮಕ್ಕೆ ಸಂಬಂಧಿಸಿದ್ದು ಎಂದರೆ ನಿಜ. ಹದನೂರು ಗ್ರಾಮದಿಂದ ನಮ್ಮ ಕಲ್ಲೂರ ಗ್ರಾಮ ಸುಮಾರು 80 ಕಿ.ಮೀ. ಅಂತರವಿದೆ ಎಂದರೆ ನಿಜ. ಭೂಸ್ವಾಧೀನಾಧಿಕಾರಿ ಯೋಗ್ಯವಾದ ಪರಿಹಾಣ ಧನ ನೀಡಿದ್ದರೂ ಸಹ ಹೆಚ್ಚಿಗೆ ಪರಿಹಾರ ಧನ ಪಡೆಯುವ ಸಲುವಾಗಿ ಪ್ರಕರಣ ದಾಖಲು ಮಾಡಿರುತ್ತೇವೆಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀಮತಿ ADGP ರವರಿಂದಃ**

ಸ್ವಾಧೀನಪಡಿಸಿಕೊಂಡ ಜಮೀನಿಗೆ ಸಂಬಂಧಿಸಿದಂತೆ ಅವಾರ್ಡ್ ಆದೇಶ 2008 ರಲ್ಲಿ ಆಗಿರುತ್ತದೆ ಎಂದರೆ ನಿಜ. ನಮ್ಮ ಜಮೀನು ನೀರಾವರಿ ಜಮೀನು ಎಂದು ತೋರಿಸಲು ಯಾವುದಾದರೂ ದಾಖಲಾತಿಯನ್ನು ಸಲ್ಲಿಸಿದ್ದೀರಾ ಎಂದರೆ ಹಾಜರುಪಡಿಸಿರುತ್ತೇನೆ. ನಿಪಿ-2 ರಿಂದ 4 ರ ಆದೇಶಗಳಿಗೂ ನಮ್ಮ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ನಮ್ಮ ತಾಯಿ ಹೆಸರು ಕಲ್ಯಾಣಮ್ಮ. ನಾವು ಸಲ್ಲಿಸಿದ ಅರ್ಜಿಯಲ್ಲಿ ಪ್ರಸ್ತುತ ಪ್ರಕರಣದಲ್ಲಿ ನಮ್ಮ ತಾಯಿ ಹೆಸರು ಅಯ್ಯಮ್ಮ ಅಂತಾ ಬರೆಸಿರುತ್ತೇನೆಂದರೆ ನಿಜ. ನಾನು ನ್ಯಾಯಾಲಯದಲ್ಲಿ ಹಾಜರುಪಡಿಸಿದ ವಂಶಾವಳಿ, ಆಧಾರ್ ಕಾರ್ಡ್ ನಲ್ಲಿ ನಮ್ಮ ತಾಯಿ ಹೆಸರು ಕಲ್ಲಮ್ಮ ಎಂದು ಹಾಗೂ ನಮ್ಮ ತಂದೆಯ ಮರಣ ಪ್ರಮಾಣ ಪತ್ರದಲ್ಲಿ ಹೆಂಡತಿ ಹೆಸರು ಕಲ್ಲಮ್ಮ ಅಂತಾ ನಮೂದಾಗಿದೆ ಎಂದರೆ ನಿಜ. ನನ್ನ ಸಾಕ್ಷಿ ಪ್ರಮಾಣ ಪತ್ರದಲ್ಲಿ ಬರೆದಿರುವಂತಹ ವಿಚಾರಗಳು ಸುಳ್ಳಿನಿಂದ ಕೂಡಿವೆ ಎಂದರೆ ಸರಿಯಲ್ಲ. ಸರಕಾರದವರು ಸ್ವಾಧೀನಪಡಿಸಿಕೊಂಡ ಜಮೀನಿಗೆ ಅಧಿಕಾರಿಗಳ ಮೂಲಕ ಭೇಟಿ ನೀಡಿ ಪರಿಶೀಲಿಸಿ ಯೋಗ್ಯ ಪರಿಹಾರ ಧನ ನೀಡಿರುತ್ತಾರೆಂದರೆ ಸರಿಯಲ್ಲ. ಸರಕಾರದಿಂದ ಹೆಚ್ಚಿಗೆ ಪರಿಹಾರ ಧನ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು, ಜೇವರ್ಗಿ